**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: ಗದಗ ಜಿಲ್ಲೆ ನರಗುಂದ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ 2015-16ನೇ ಸಾಲಿನಲ್ಲಿ ಕೈಗೊಂಡು ಪೂರ್ಣಗೊಂಡ ಗ್ರಾಮೀಣ ರಸ್ತೆಗಳ ಅಭಿವೃದ್ಧಿ ಕಾಮಗಾರಿಗಳ ಬಿಲ್ ಪಾವತಿಗೆ ಲೆಕ್ಕ ಶೀರ್ಷಿಕೆ-3054 (ಯೋಜನೇತರ) ಅಡಿ ರೂ.100.00ಲಕ್ಷಗಳ ಅನುದಾನ ಬಿಡುಗಡೆ ಮಾಡುವ ಕುರಿತು.

ಓದಲಾಗಿದೆ:

1. ಸರ್ಕಾರದ ಆದೇಶ ಸಂ:ಗ್ರಾಅಪ:68/2:ಆರ್ಆರ್ಸಿ:2015, ದಿನಾಂಕ:30-7-2015.
2. ಆರ್ಥಿಕ ಇಲಾಖೆಯ ಟಿಪ್ಪಣಿ ಕಂಡಿಕೆ ಸಂಖ್ಯೆ:ಆಇ/291/ವೆಚ್ಚ-6/2015, ದಿನಾಂಕ:9-10-2015

**ಪ್ರಸ್ತಾವನೆ:**

**ಗದಗ ಜಿಲ್ಲೆ ನರಗುಂದ ವಿಧಾನಸಭಾ ಕ್ಷೇತ್ರ** ವ್ಯಾಪ್ತಿಯಲ್ಲಿ 2015-16ನೇ ಸಾಲಿನಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಿ ಮೇಲೆ ಓದಲಾದ-1 ರಲ್ಲಿ ಇಲಾಖೆಯಿಂದ ಆದೇಶ ಹೊರಡಿಸಲಾಗಿತ್ತು.

ಸದರಿ ಆದೇಶದಂತೆ ಕೈಗೊಂಡ ಗ್ರಾಮೀಣ ರಸ್ತೆ ಅಭಿವೃದ್ಧಿ ಕಾಮಗಾರಿಗಳ ಬಿಲ್ ಪಾವತಿಗಾಗಿ ಆರ್ಥಿಕ ಇಲಾಖೆಯು ಮೇಲೆ ಓದಲಾದ-2ರಲ್ಲಿ ಸಹಮತಿಸಿದಂತೆ ಪ್ರಸ್ತುತ ಸಾಲಿನ ಲೆ.ಶೀ-3054-80-196-1-01-300(ಯೋಜನೇತರ)ಅಡಿ ಪೂರ್ಣಗೊಂಡ ಕಾಮಗಾರಿಗಳ ಬಿಲ್ ಪಾವತಿಗಾಗಿ ಗದಗ ಜಿಲ್ಲಾ ಪಂಚಾಯತಿಗೆ ರೂ.100.00ಲಕ್ಷಗಳನ್ನು ಬಿಡುಗಡೆ ಮಾಡಲು ಸರ್ಕಾರವು ತೀರ್ಮಾನಿಸಿರುತ್ತದೆ. ಆದ್ದರಿಂದ ಈ ಆದೇಶ,

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:48/16:ಆರ್ಆರ್ಸಿ:2015, ಬೆಂಗಳೂರು, ದಿನಾಂಕ:13-10-2015.**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಪ್ರಸ್ತುತ 2015-16ನೇ ಸಾಲಿನ ಆರ್ಥಿಕ ವರ್ಷದಲ್ಲಿ **ಗದಗ ಜಿಲ್ಲೆ ನರಗುಂದ ವಿಧಾನಸಭಾ ಕ್ಷೇತ್ರ** ವ್ಯಾಪ್ತಿಯಲ್ಲಿ ಮೇಲೆ ಓದಲಾದ 1ರ ಆದೇಶದನ್ವಯ ಕೈಗೊಂಡ ಗ್ರಾಮೀಣ ರಸ್ತೆ ಅಭಿವೃದ್ಧಿ ಕಾಮಗಾರಿಗಳ ಬಿಲ್ ಪಾವತಿಗಾಗಿ ಲೆ.ಶೀ-3054-80-196-1-01-300(ಯೋಜನೇತರ)(Link Head -3054-00-101-0-28-200- ನಿರ್ವಹಣೆ-ಯೋಜನೇತರ) ಅಡಿ ರೂ.100.00ಲಕ್ಷ (ಒಂದುನೂರು ಲಕ್ಷಗಳು ಮಾತ್ರ) ಗಳನ್ನು ಕೆಳಕಂಡ ಷರತ್ತಿಗೊಳಪಟ್ಟು ಗದಗ ಜಿಲ್ಲಾ ಪಂಚಾಯತಿಗೆ ಬಿಡುಗಡೆ ಮಾಡಲು ಸರ್ಕಾರವು ಹರ್ಷಿಸುತ್ತದೆ.

**ಷರತ್ತುಗಳು,**

1. ಜಿಲ್ಲಾ ಪಂಚಾಯತಿಗೆ ಬಿಡುಗಡೆ ಮಾಡಿದ ಅನುದಾನವನ್ನು 2015-16ನೇ ಸಾಲಿನಲ್ಲಿ **ಗದಗ ಜಿಲ್ಲೆ ನರಗುಂದ ವಿಧಾನಸಭಾ ಕ್ಷೇತ್ರ** ವ್ಯಾಪ್ತಿಯಲ್ಲಿನ ರಸ್ತೆ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಂಡು ಪೂರ್ಣಗೊಳಿಸಿದ ಕಾಮಗಾರಿಗಳಿಗೆ ಮಾತ್ರ ಉಪಯೋಗಿಸತಕ್ಕದ್ದು. ಈ ಅನುದಾನವನ್ನು ಮಾರ್ಗಪಲ್ಲಟ ಮಾಡುವಂತಿಲ್ಲ. ಹಾಗೂ ಯಾವುದೇ ಕಾರಣಕ್ಕೂ ವ್ಯಪಗತವಾಗದಂತೆ ನೋಡಿಕೊಳ್ಳತಕ್ಕದ್ದು.
2. ಪೂರ್ಣಗೊಂಡ ಕಾಮಗಾರಿಗಳ ವಿವರಗಳನ್ನು ಗಾಂಧೀ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಅಳವಡಿಸಿರುವುದನ್ನು ಖಚಿತಪಡಿಸಿಕೊಂಡು ಕಾಮಗಾರಿಗಳ ಬಿಲ್ಲುಗಳನ್ನು ಪಾವತಿಸತಕ್ಕದ್ದು. ತಪ್ಪಿದಲ್ಲಿ ಕಾರ್ಯಪಾಲಕ ಇಂಜಿನಿಯರ್ ಹಾಗೂ ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ಗಳು ಜವಾಬ್ದಾರರಾಗುತ್ತಾರೆ.
3. ಬಳಕೆಯಾದ ಹಣ ಮತ್ತು ಕಾಮಗಾರಿ ಪ್ರಗತಿಯನ್ನು ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ ರವರಿಗೆ ಒದಗಿಸತಕ್ಕದ್ದು.

4. ಪ್ರಸ್ತುತ ಈ ಶೀರ್ಷಿಕೆಯಡಿ ಜಿಲ್ಲಾ ಪಂಚಾಯತಿ ಅನುಷ್ಠಾನಗೊಳಿಸಿರುವ ರಸ್ತೆ ಕಾಮಗಾರಿಗಳನ್ನು Worksoft works monitoring ಪದ್ಧತಿ ಮುಖಾಂತರ ಉಸ್ತುವಾರಿ ಮಾಡಬೇಕಾಗಿದ್ದು, ಈ ಸಂಬಂಧ ಪೂರ್ಣ ಮಾಹಿತಿಯನ್ನು Worksoft website ನಲ್ಲಿ ತಪ್ಪದೇ ಅಳವಡಿಸತಕ್ಕದ್ದು.

5. 2014-15ನೇ ಸಾಲಿನಿಂದ ಇಲಾಖೆಯಿಂದ ಅನುಷ್ಠಾನಗೊಳ್ಳುತ್ತಿರುವ ಅನುಮೋದನೆಗೊಂಡ ಕ್ರಿಯಾ ಯೋಜನೆಯಲ್ಲಿರುವ ಎಲ್ಲಾ ಯೋಜನೆಗಳ ಎಲ್ಲಾ ಕಾಮಗಾರಿಗಳ ವಿವರಗಳನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಅಳವಡಿಸಿ ಹಣ ಪಾವತಿಸಲು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಿಂದ ಪಡೆಯಲಾದ ಪಾವತಿ ಆದೇಶವಿದ್ದಲ್ಲಿ ಮಾತ್ರ ಕಾಮಗಾರಿಗಳ ಬಿಲ್ಲುಗಳ ಪಾವತಿಯನ್ನು ಕಡ್ಡಾಯವಾಗಿ ಮಾಡುವಂತೆ ಹಾಗೂ ಸರ್ಕಾರದ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಸೂಚಿಸಲಾಗಿದೆ. ಅದರಂತೆ ಈ ಆದೇಶದಲ್ಲಿ ಬಿಡುಗಡೆ ಮಾಡಿರುವ ಅನುದಾನಕ್ಕೆ ಸಂಬಂಧಿಸಿದಂತೆ ಕೈಗೊಂಡು ಪೂರ್ಣಗೊಳಿಸಿರುವ ಕಾಮಗಾರಿಗಳನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಅಳವಡಿಸಿರುವ ನಿಬಂಧನೆಗೆ ಒಳಪಡಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಕಂಡಿಕೆ ಸಂಖ್ಯೆ:ಆಇ/291/ವೆಚ್ಚ-6/2015, ದಿನಾಂಕ: 9-10-2015ರಲ್ಲಿ ಸಹಮತಿಸಿದ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬೂವನಹಳ್ಳಿ ನಾಗರಾಜ್)
ನಿರ್ದೇಶಕರು
ಸುವರ್ಣ ಗ್ರಾಮೋದಯ ಯೋಜನೆ ಹಾಗೂ
ಸರ್ಕಾರದ ಪದನಿಮಿತ್ತ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿಯನ್ನು:**

1. ಮಹಾಲೇಖಪಾಲರು (ಲೆಕ್ಕಪತ್ರ), ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಆಡಿಟ್-1), ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಆಡಿಟ್-2), ಕರ್ನಾಟಕ, ಬೆಂಗಳೂರು.
4. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
5. ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನ ಸೌಧ, ಬೆಂಗಳೂರು
6. ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು
7. ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (PMU)(IF),5ನೇ ಹಂತ, ಬಹುಮಹಡಿ ಕಟ್ಟಡ, ಬೆಂಗಳೂರು
8. ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
9. ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
10. ವಿಶೇಷಾಧಿಕಾರಿಗಳು (ಜಿಪಂ) ಮತ್ತು ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ, ಆರ್ಥಿಕ ಇಲಾಖೆ ವಿಧಾನ ಸೌಧ, ಬೆಂಗಳೂರು
11. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
12. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.

13. ಉಪ ನಿರ್ದೇಶಕರು, ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ಟ್ರೆಜರಿ ಡಿಪಾರ್ಟ್‌ಮೆಂಟ್, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
14. ಜಿಲ್ಲಾ ಖಜಾನಾಧಿಕಾರಿಗಳು, ಗದಗ ಜಿಲ್ಲೆ.
15. ಅಧೀನ ಕಾರ್ಯದರ್ಶಿಗಳು (ವೆಚ್ಚ-6), ಜಿ.ಪಂ. ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
16. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜನಿಯರಿಂಗ್ ಇಲಾಖೆ, ಬೆಂಗಳೂರು-9
17. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಗದಗ
18. ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಐ.ಡಿ.ಎಲ್. ಬೆಂಗಳೂರು.
19. ಅಧೀಕ್ಷಕ ಇಂಜನಿಯರ್, ಪಂಚಾಯತ್ ರಾಜ್ ಇಂಜನಿಯರಿಂಗ್ ವೃತ್ತ, ಧಾರವಾಡ
20. ಮಾಹಿತಿ ಕೇಂದ್ರದ ಗಣಕ ಕೋಶ ಮುಖ್ಯಸ್ಥರು, ಗ್ರಾಅಪಂರಾ ಇಲಾಖೆ ಇವರಿಗೆ ಇಲಾಖೆಯ ಅಂತರ್ಜಾಲದಲ್ಲಿ ಅಳವಡಿಸಲು ಹಾಗೂ ಗ್ರೂಪ್ ಮೈಲ್ ನಲ್ಲಿ ರವಾನಿಸಲು ಸೂಚಿಸಿದೆ
21. ರಕ್ಷಾ ಕಡತ / ಹೆಚ್ಚುವರಿ ಪ್ರತಿ.